2) ಶ್ರೀಮತಿ ಸರಸ್ವತಿ, ಸದಸ್ಯರು, ಜಲವಾಯು ವಿಹಾರ ಅಪಾರ್ಟ್‌ಮೆಂಟ್ ಓನರ್ಸ್ ಅಸೋಸಿಯೇಷನ್ ರವರು ಮಾತನಾಡಿ, ಸಿ.ಎಂ.ಆರ್ ರಸ್ತೆಯಲ್ಲಿ ವೈಟ್‌ಟಾಪಿಂಗ್ ಕಾಮಗಾರಿ ಪ್ರಗತಿಯಲ್ಲಿದ್ದು, ರಸ್ತೆಯ ಅಂಚಿನಲ್ಲಿರುವ ಮರಗಳಿಗೆ ಪಾತಿಗಳನ್ನು ನಿರ್ಮಾಣ ಮಾಡಿದ್ದು, ಸದರಿ ಪಾತಿಗಳು ಆಳದಲ್ಲಿದ್ದು, ಸಾರ್ವಜನಿಕರು ಓಡಾಡಲು ಕಷ್ಟಸಾಧ್ಯವಾಗಿರುತ್ತವೆ. ಇವುಗಳನ್ನು ಕೂಡಲೇ ರಸ್ತೆ ಮಟ್ಟಕ್ಕೆ ಎತ್ತರಿಸಲು ಸಭಾ ಗಮನಕ್ಕೆ ತಂದಾಗ, ಸಭೆಯಲ್ಲಿ ಚರ್ಚಿಸಿ, ಮುಂದಿನ ಸಭೆಗೆ ಸದರಿ ವಿಭಾಗದ ಅಧಿಕಾರಿಗಳನ್ನು ಆಹ್ವಾನಿಸಿ, ಈ ಬಗ್ಗೆ ವಿವರ ನೀಡಲು ಕೋರಲಾಗುವುದು ಎಂದು ಸಭೆಯಲ್ಲಿ ಹಾಜರಿದ್ದ ಅಭಿಯಂತರರು ಸಬೆಯ ಗಮನಕ್ಕೆ ತಂದರು.

3) **ಶ್ರೀ ಪಿಳ್ಳಪ್ಪ (ಅಧ್ಯಕ್ಷರು, ರಾಮಯ್ಯ ಬಡಾವಣೆ ನಿವಾಸಿಗಳ ಸಂಘ), ರವರು ಮಾತನಾಡಿ,** ವಾರ್ಡ್ ವ್ಯಾಪ್ತಿಯಲ್ಲಿ ಇತ್ತೀಚೆಗೆ ಸಾರ್ವಜನಿಕರು ಮಾಸ್ಕ್‌ಗಳನ್ನು ಹಾಕದೇ ಎಲ್ಲಂದರಲ್ಲಿ ಓಡಾಡುತ್ತಿರುವುದು ಕಂಡುಬಂದಿದ್ದು, ಅಂತಹ ವ್ಯಕ್ತಿಗಳಿಗೆ ಸೂಕ್ತ ದಂಡ ವಿಧಿಸಲು ಹಾಗೂ ಪ್ರಸ್ತುತ ಅಂತಹ ಪ್ರಕರಣಗಳಿಗೆ ಸಂಬಂಧಿಸಿದಂತೆ ಒಟ್ಟು ಎಷ್ಟು ದಂಡವನ್ನು ವಿಧಿಸಿದ್ದಾರೆ ಎಂಬ ಮಾಹಿತಿಯನ್ನು ನೀಡಲು ಸಭೆಯ ಗಮನಕ್ಕೆ ತಂದಾಗ, ಮಾರ್ಷಲ್ ಮಾತನಾಡಿ ಘನತ್ಯಾಜ್ಯಕ್ಕೆ ಸೇರಿ ಒಟ್ಟು 260 ಜನರಿಗೆ ದಂಡವನ್ನು ವಿಧಿಸಲಾಗಿದ್ದು, ದಂಡದ ಮೊತ್ತ ರೂ.58,530/- ಗಳನ್ನು ಸಂಗ್ರಹಿಸಲಾಗಿರುವುದಾಗಿ ಸಭೆಗೆ ತಿಳಿಸಿದರು.

4) **ಮಾನ್ಯ ಅಧ್ಯಕ್ಷರು ಮಾತನಾಡಿ,** ನಂಜುಂಡಪ್ಪ ರಸ್ತೆಯಲ್ಲಿ ನೀರು ಸಮರ್ಪಕವಾಗಿ ಸರಬರಾಜು ಆಗುತ್ತಿಲ್ಲವೆಂದು ಸಾರ್ವಜನಿಕರು ಮೌಖಿಕವಾಗಿ ದೂರಿರುತ್ತಾರೆ ಎಂದು ಸಭಾ ಗಮನಕ್ಕೆ ತಂದಾಗ ಬಿ.ಡ.ಬ್ಲ್ಯೂ.ಎಸ್.ಎಸ್.ಬಿ ಅಧಿಕಾರಿಗಳು ಈಗಾಗಲೇ ನೀರು ಸರಬರಾಜು ಮಾಡುತ್ತಿದ್ದು, ನೀರು ಅವಧಿಯನ್ನು ವಿಸ್ತರಣೆ ಮಾಡಲು ಸಭೆಯಲ್ಲಿ ಸರ್ವಾನುಮತದಿಂದ ತೀರ್ಮಾನಿಸಲಾಯಿತು.

5) **ಶ್ರೀ ಪಿಳ್ಳಪ್ಪ (ಅಧ್ಯಕ್ಷರು, ರಾಮಯ್ಯ ಬಡಾವಣೆ ನಿವಾಸಿಗಳ ಸಂಘ) ರವರು ಮಾತನಾಡಿ,** ವಾರ್ಡ್ ಪ್ರದೇಶದಲ್ಲಿರುವ ಉದ್ಯಾನವನಗಳನ್ನು ಸಾರ್ವಜನಿಕರ ವಿಹಾರಕ್ಕಾಗಿ ಬೆಳಿಗ್ಗೆ ಹಾಗೂ ಸಾಯಂಕಾಲ ನಿಗಧಿತ ಸಮಯಕ್ಕೆ ತೆರೆದು ನಿಗಧಿತ ಸಮಯಕ್ಕೆ ಮುಚ್ಚಲು ಹಾಗೂ ವಿದ್ಯುತ್ ದೀಪಗಳ ಬಗ್ಗೆ ಸಭಾ ಗಮನಕ್ಕೆ ತಂದಾಗ, ಸಭೆಯಲ್ಲಿ ಚರ್ಚಿಸಲಾಗಿ ಸಭೆಯಲ್ಲಿ ಹಾಜರಿದ್ದ ತೋಟಗಾರಿಕಾ ಇಲಾಖಾಧಿಕಾರಿಗಳು ಉತ್ತರ ನೀಡಿ, ಇನ್ನು ಮುಂದೆ ನಿಗಧಿತ ಸಮಯಕ್ಕೆ ಉದ್ಯಾನವನಗಳನ್ನು ತೆರೆದು ಮೇಲುಸ್ತುವಾರಿಯನ್ನು ನೋಡಿಕೊಳ್ಳಲಾಗುವುದು ಎಂದು ಸಭೆಗೆ ತಿಳಿಸಿದರು.

6) **ವೈದ್ಯಾಧಿಕಾರಿಗಳು ಮಾತನಾಡಿ,** ಪ್ರಸ್ತುತ ವಾರ್ಡ್ ಪ್ರದೇಶದಲ್ಲಿ ಕೋವಿಡ್-19 ನಿಯಂತ್ರಣದಲ್ಲಿದ್ದು, ಒಟ್ಟು 644 ಪ್ರಕರಣಗಳು ಇದ್ದು, 442 ಹೋಮ್ ಐಸೋಲೇಷನ್ ಪೂರ್ಣಗೊಳಿಸಿರುತ್ತಾರೆ, 180 ಜನ ಆಸ್ಪತ್ರೆಯಿಂದ ಗುಣಮುಖರಾಗಿ ಬಿಡುಗಡೆಯಾಗಿರುತ್ತಾರೆ. 20 ಜನ ಮರಣ ಹೊಂದಿರುತ್ತಾರೆ, ಸಕ್ರಿಯ ಪ್ರಕರಣಗಳು 02 ಆಗಿರುತ್ತವೆ. ನಂತರ ಮಾತನಾಡಿ, ವಾರ್ಡ್ ಪ್ರದೇಶದಲ್ಲಿ 18877 ಜನಕ್ಕೆ ಆರ್.ಟಿ.ಪಿ.ಸಿ.ಆರ್ ತಪಾಸಣೆ ಮಾಡಲಾಗಿರುತ್ತದೆ. 5625 ಜನಕ್ಕೆ ರ್‍ಯಾಪಿಡ್ ತಪಾಸಣೆ ಕೈಗೊಳ್ಳಲಾಗಿರುತ್ತದೆ. ಬಿಬಿಎಂಪಿ ಗೆ

